# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1495
ಸದಸ್ಯರ ಹೆಸರು : ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 18.12.2025
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ್ ಕಾರಂಜಾ ಯೋಜನೆ ಅಡಿಯಲ್ಲಿ ಜಮೀನು ಕಳೆದುಕೊಂಡ ರೈತರಿಗೆ ವೈಜ್ಞಾನಿಕ ಪರಿಹಾರ ನೀಡುವ ಕುರಿತು 3 ವರ್ಷಗಳಿಂದ ಪ್ರತಿಭಟನೆ ನಡೆಯುತ್ತಿರುವ ರೈತರಿಗೆ ಪರಿಹಾರ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;</td><td rowspan="3">ಕಾರಂಜಾ ಯೋಜನೆ ಅಡಿಯಲ್ಲಿ ಒಟ್ಟು 21217 ಎಕರೆ 36 ಗುಂಟೆ ಜಮೀನು ಭೂಸ್ವಾಧೀನವಾಗಿರುತ್ತದೆ. ಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ಭೂಸ್ವಾಧೀನ ಕಾಯ್ದೆಯಂತೆ ಇತರೆ ಶಾಸನಬದ್ಧ ಸೌಲಭ್ಯಗಳನ್ನು ಒಳಗೊಂಡಂತೆ ಸಂಪೂರ್ಣ ಪರಿಹಾರ ಪಾವತಿಸಲಾಗಿದೆ. 482 ಎಕರೆ 23 ಗುಂಟೆ ಭೂಸ್ವಾಧೀನಪಡಿಸಿಕೊಳ್ಳಲು ಬಾಕಿ ಇದ್ದು, ಭೂಸ್ವಾಧೀನ ಪ್ರಕ್ರಿಯೆ ವಿವಿಧ ಹಂತದಲ್ಲಿವೆ.<br><br>ಮುಂದುವರೆದು, ಹೆಚ್ಚುವರಿ ಪರಿಹಾರ ಕೋರಿ ನ್ಯಾಯಾಲಯದ ಮೊರೆಹೋದ ಭೂಮಾಲೀಕರಿಗೆ ಹೆಚ್ಚುವರಿ ಪರಿಹಾರ ವಿತರಿಸಲಾಗಿರುತ್ತದೆ.<br><br>ಕಾರಂಜಾ ಮುಳಗಡೆ ಸಂತ್ರಸ್ಥರ ಬೇಡಿಕೆಗಳನ್ನು ಪರಿಶೀಲಿಸುವ ಸಂಬಂಧದಲ್ಲಿ ದಿನಾಂಕ:07.04.2025 ರಂದು ಪ್ರಾದೇಶಿಕ ಆಯುಕ್ತರು, ಕಲಬುರಗಿ ರವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ದಿನಾಂಕ:13.11.2025ರಂದು ವರದಿ ನೀಡಿದ್ದು, ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.</td></tr>
<tr><td>ಆ)</td><td>ಕಾರಂಜಾ ಸಂತ್ರಸ್ತರ ಸಮಸ್ಯೆಗೆ ಸರ್ಕಾರವು ತಾಂತ್ರಿಕ ಸಮಿತಿ ರಚನೆ ಮಾಡಿ ಸುಮಾರು 1 ವರ್ಷವಾದರೂ ಇಲ್ಲಿಯವರೆಗೆ ರೈತರ ಸಮಸ್ಯೆಗೆ ಪರಿಹಾರ ಸಿಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು;</td></tr>
<tr><td>ಇ)</td><td>ಸರ್ಕಾರದಿಂದ ಯಾವಾಗ ರೈತರ ಸಮಸ್ಯೆ ಪರಿಹರಿಸಲಾಗುವುದು? (ಮಾಹಿತಿ ನೀಡುವುದು)</td></tr>
</table>

ಸಂಖ್ಯೆ:ಜಸಂಇ 181 ಎಂಎಲ್ಎ 2025

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ